# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1328(1602)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ಬೆಂಗಳೂರು ಕೆಂಪೇಗೌಡ ಬಸ್ ನಿಲ್ದಾಣದಿಂದ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣಕ್ಕೆ ಹೋಗುವ ಸುರಂಗ ಮಾರ್ಗದ ಅವ್ಯವಸ್ಥೆ ಕುರಿತು

(ಅ) ಬೆಂಗಳೂರಿನ ಕೆಂಪೇಗೌಡ ಬಸ್ ನಿಲ್ದಾಣದಿಂದ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣಕ್ಕೆ ಹೋಗುವ ಸುರಂಗ ಮಾರ್ಗದಲ್ಲಿ ದಿನನಿತ್ಯ ಹಲವಾರು ಅಂಗಡಿ-ಮುಂಗಟ್ಟುಗಳನ್ನು ಇಟ್ಟುಕೊಂಡು ವ್ಯಾಪಾರ ವಹಿವಾಟು ನಡೆಸಲಾಗುತ್ತಿರುವುದರಿಂದ ಸದರಿ ಮಾರ್ಗದಲ್ಲಿ ಸಂಚರಿಸುವ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ಮಾರ್ಗದ ಅವ್ಯವಸ್ಥೆ ಸರಿಪಡಿಸುವ ನಿಟ್ಟಿನಲ್ಲಿ ಇಲ್ಲಿಯವರೆಗೆ ಯಾವ ಯಾವ ಕ್ರಮ ಕೈಗೊಳ್ಳಲಾಗಿದೆ ಹಾಗೂ ಕಳೆದ ಎರಡು ವರ್ಷಗಳಲ್ಲಿ ಸುರಂಗ ಮಾರ್ಗದ ಸ್ವಚ್ಛತೆಗೆ ವೆಚ್ಚ ಮಾಡಲಾಗಿರುವ ಹಣವೆಷ್ಟು;

(ಇ) ಹಲವಾರು ಬಾರಿ ಅಂಗಡಿ-ಮುಂಗಟ್ಟುಗಳನ್ನು ತೆರವು ಮಾಡಿದರೂ ಸದರಿ ಸ್ಥಳಗಳಲ್ಲಿ ಕೆಲವೇ ದಿನಗಳಲ್ಲಿ ಮತ್ತೆ ವ್ಯಾಪಾರ ವಹಿವಾಟು ಪ್ರಾರಂಭ ಮಾಡಲಾಗುತ್ತಿದ್ದು, ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು?